ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ          ದಿನಾಂಕ : DATE : 02/06/2019

# ಶಾಸಕ ರಾಮದಾಸ್ ವಿರುದ್ಧದ ಬಿ ರಿಪೋರ್ಟ್ ವಜಾ

ಬೆಂಗಳೂರು: ಮಹಿಳೆಯೊಬ್ಬರಿಗೆ ವಂಚಿಸಿದ ಆರೋಪ ಪ್ರಕರಣದಲ್ಲಿ ಮಾಜಿ ಸಚಿವ ಹಾಗೂ ಮೈಸೂರಿನ ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಶಾಸಕ ಎಸ್.ಎ. ರಾಮದಾಸ್ ಅವರ ವಿರುದ್ಧ ವಿಚಾರಣಾ ನ್ಯಾಯಾಲಯಕ್ಕೆ ಸಿಐಡಿ ಸಲ್ಲಿಸಿದ್ದ 'ಬಿ ರಿಪೋರ್ಟ್' ಅನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ವಜಾಗೊಳಿಸಿದೆ. ಪ್ರಕರಣದ ವಿಚಾರಣೆ ಪೂರ್ಣಗೊಳಿಸಿ ಕಾಯ್ದಿರಿಸಿದ್ದ ತೀರ್ಪನ್ನು ಶನಿವಾರ ಪ್ರಕಟಿಸಿದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ರಾಮಚಂದ್ರ ಡಿ.ಹುದ್ದಾರ್, ದೂರುದಾರರ ಹೇಳಿಕೆ ಗಮನಿಸಿದರೆ ಈ ಪ್ರಕರಣ ವಿಚಾರಣೆ ಅರ್ಹವಾಗಿದ್ದು, ಸಿಐಡಿ ಪೊಲೀಸರು ಸಲ್ಲಿಸಿದ್ದ ಬಿ ರಿಪೋರ್ಟ್ ವಜಾಗೊಳಿಸಿ ಆದೇಶಿಸಿದರು.